ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ರಾಜ್ಯದಲ್ಲಿರುವ ನಗರ ಮತ್ತು ನೀರು ಸರಬರಾಜು, ಒಳಚರಂಡಿಗಳ ಸ್ಥಿತಿಗತಿಗಳ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

948(1053) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಗತಿಯಲ್ಲಿರುವ ನಗರ ನೀರು ಸರಬರಾಜು ಮತ್ತು ಒಳಚರಂಡಿ ಕಾಮಗಾರಿ ಯೋಜನೆಗಳು ಯಾವುವು;

(ಆ) 2019-20 ಮತ್ತು 2020-21ರಲ್ಲಿ ಈ ಯೋಜನೆಗಳಿಗೆ ಬಿಡುಗಡೆಯಾದ ಹಣವೆಷ್ಟು ;

(ಇ) ಟೆಂಡರ್ ಅವಧಿ ಪೂರ್ಣಗೊಂಡಿದ್ದರೂ ಕಾಮಗಾರಿ ಮುಗಿಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ನಗರ ಪ್ರದೇಶಗಳಲ್ಲಿ ನೂತನವಾಗಿ ನಿವೇಶನಗಳನ್ನು ನೀಡುವ ಯೋಜನೆಗಳು ಸರ್ಕಾರದ ಮುಂದಿದೆಯೇ ?